ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 10-03-2021 ಪ್ರಶ್ನೆ ಸಂಖ್ಯೆ : 147 (1005)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮ ನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 10-03-2021

ಉತ್ತರಿಸುವ ಸಚಿವರು: ಕಂದಾಯ ಸಚಿವರು

ವಿಷಯ : ದಾವಣಗೆರೆ ವಿಶ್ವವಿದ್ಯಾನಿಲಯದ ಜಾಗವನ್ನು ಶೈಕ್ಷಣಿಕ ಉದ್ದೇಶಕ್ಕೆ ಬಿಟ್ಟು ಅನ್ಯ ಉದ್ದೇಶಗಳಿಗೆ ಮಂಜೂರು ಮಾಡಿರುವ ಬಗ್ಗೆ

(ಅ) ದಾವಣಗೆರೆ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಸೇರಿದ ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ ಶಾಮನೂರು ಗ್ರಾಮದ ಸರ್ವೆ ನಂ.97 ರಲ್ಲಿ 4.31 ಎಕರೆ ಜಮೀನನ್ನು ಜಿಲ್ಲಾ ಮಟ್ಟದ ಅಧಿಕಾರಿಗಳ ವಸತಿ ಗೃಹ ನಿರ್ಮಾಣಕ್ಕಾಗಿ ಜಿಲ್ಲಾಧಿಕಾರಿಗಳು ದಾವಣಗೆರೆ ಜಿಲ್ಲೆ ಇವರು ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೇ;

(ಆ) ಸಲ್ಲಿಸಿದ್ದಲ್ಲಿ, ಈ ಸಂಬಂಧ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ಯ ಉಚ್ಚ ನ್ಯಾಯಾಲಯವು ಈ ಹಿಂದೆ ಸದರಿ ವಿಶ್ವವಿದ್ಯಾಲಯಕ್ಕೆ ಸೇರಿದ ಜಮೀನನ್ನು ಮಂಜೂರು ಮಾಡದಂತೆ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದರೂ, ಮತ್ತೊಮ್ಮೆ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುವುದರ ಔಚಿತ್ಯವೇನು? (ಸಂಪೂರ್ಣ ವಿವರ ನೀಡುವುದು)